# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅ.ಸ.ಪ.ಸಂಖ್ಯೆ: ಕಂಪ್ಲೇಂಟ್/ಲೋಕ್/ಬಿಜಿಎಮ್/1871/2016/ಎಸ್‌ಆರ್.ಎಪಿಪಿ–2, ದಿನಾಂಕ:18.01.2018

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 16.01.2018 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಗಿರೀಶ ಜಿ.ಗಿರಿಯೋಲ್ಕರ್ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, 1) ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ 2) ಶ್ರೀ ಕೆ.ಪಿ.ಅನಂತಕುಮಾರ್, ಸಹಾಯಕ ಕೃಷಿ ಅಧಿಕಾರಿ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಜಗಳೂರು, ದಾವಣಗೆರೆ ಜಿಲ್ಲೆ 3) ಶ್ರೀ ಎಸ್.ಬಿ.ರವಿಕುಮಾರ್, ಯೋಜನಾ ನಿರ್ದೇಶಕರು(ಡಿಆರ್‌ಡಿಎ), ಜಿಲ್ಲಾ ಪಂಚಾಯತಿ, ಬಳ್ಳಾರಿ ಮತ್ತು 4) ಶ್ರೀಮತಿ ಮಮತಾ ನಂಜಪ್ಪನವರ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ಹಿರೇಕಬ್ಬಾರ್ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ (ಇನ್ನು ಮುಂದೆ 'ಎದುದಾರರು 1 ರಿಂದ 4' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿ, ಕೆಳಕಂಡ ಆರೋಪದ ಮೇಲೆ ಇವರ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿರುತ್ತಾರೆ.

The respondent No.1 was working as panchayth Devolopment Officer in Hirekebbar Gram Panchayath, Hirekere Taluk. The 4th respondent Mamatha Nanjappanvar was working as President of Hirekebbar Grama Panchayth. The 1st and 4th respondent passed a resolution on 9.6.2009 in the Gramasabha at Chikkabbara village regarding the plantation of the banana plant in the land of sharanagowda Rudragowda patil under Mahatma Gandhi Rural Employment Guarantee Schime. The land in sy.No.3/A+B+4A measuring 4 acres 23guntas belongs to Sharanagowda patil and he is the beneficiary under the scheme in the year 2010-11. The estimated amount for the aforesaid plantation of banana plants was calculated at Rs.1.06 lakhs. The plantation of banana in the land of sharanagowda Rudragowda patil in sy.No.3/A+B+4A measuring 4 acres 23 guntas situated in Chikkakabbara village was implemented by the department of Horticulture under MNREGA scheme.

The first respondent Veerannagowda shivannagowda yattimani was working as Panchayth Development Officer in Hirekebbar Gram Panchayath. The 4th respondent Mamatha Nanjappanavar was the President of Hirekebbar Gram Panchayath. The first and 4th respondent prepared the action plan for plantation of banana plants in the land of Sharanagowda Rudragowda Patil for the year 2010-11 The 2nd respondent

Sri. K.P.Anantha Kumar was working as Assistant Horticulture officer in Raitha samparka Kendra, Rattihalli at that relavant point of time. The 2nd respondent gave technical approval and prepared the estimation for the banana plantation in the land of Sharanagowda Rudragowda Patil. The estimated amount was Rs.98,750/-.

The 3rd respondent Sri. S.B. Ravikumar was working as Executive officer, Taluk Panchayath. He gave an administrative approval to the action plan prepared by respondents 1 and 4 and issued work order on 24.2.2011for banana plantation in the land of Sharanagowda Rudragowda patil in the aforesaid survey number.

ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕಡತ ಮತ್ತು ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಆರೋಪಗಳು ಸಾಬೀತಾಗಿರುವುದಾಗಿ ತನಿಖಾಧಿಕಾರಿಗಳು ವರದಿ ನೀಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಸಂಸ್ಥೆಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಹಾಗೂ ಮಾನ್ಯ ಉಪಲೋಕಾಯುಕ್ತರ ಕಲಂ 12(1)ರ ವರದಿಯಲ್ಲಿ ಸದರಿ ಎದುರುದಾರ 1 ರಿಂದ 4ರಿಂದ ಪ್ರಕರಣದಲ್ಲಿ ದುರುಪಯೋಗವಾದ ಮೊತ್ತ ರೂ.98,750/–ಗಳನ್ನು ವಸೂಲಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ. ಸದರಿ ಎದುರುದಾರರಿಂದ ದುರುಪಯೋಗವಾದ ಮೊತ್ತವನ್ನು ವಸೂಲಿ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲಾ ಪಂಚಾಯತಿ ರವರಿಗೆ ನಿರ್ದೇಶನ ನೀಡಲಾಗಿದೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಗ್ರಾಪಂಕಾ 2018, ಬೆಂಗಳೂರು, ದಿನಾಂಕ 04.07.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ದಿನಾಂಕ 28.02.2018ರಂದು ವಯೋ ನಿವೃತ್ತಿ ಹೊಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ-214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

5/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್. ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ ಜಿಲ್ಲೆ,
5) ಕಾರ್ಯನಿರ್ವಾಹಕ ಅಧಿಕಾರಿ, ರಾಣಿಬೆನ್ನೂರು ತಾಲ್ಲೂಕು ಪಂಚಾಯತಿ, ರಾಣಿಬೆನ್ನೂರು, ಹಾವೇರಿ ಜಿಲ್ಲೆ, (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ ಸ್ವೀಕೃತಿಯನ್ನು ಸರ್ಕಾಕ್ಕೆ ಸಲ್ಲಿಸಲು ತಿಳಿಸಿದೆ)
6) ಶ್ರೀ ವೀರನಗೌಡ ಶಿವನಗೌಡ ಯತ್ತಿನಮನಿ, ಕಾರ್ಯದರ್ಶಿ, ತುಮ್ಮಿನಕಟ್ಟಿ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ
7) ಗಣಕ ಕೋಶ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.